**All India Radio: Bangalore**
**National Bulletin In Kannada**
**15.05.2026  19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**15.05.2026  19.35  hrs**

**<>><><*><><<>**

ಮುಖ್ಯಾಂಶಗಳು

**೧. ಯುಎಇ ಅಧ್ಯಕ್ಷರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ; ಹಲವು ಒಪ್ಪಂದಗಳಿಗೆ ಸಹಿ**

**೨. ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಪ್ರಕರಣ; ಮೂವರು ಐಪಿಎಸ್ ಅಧಿಕಾರಿಗಳನ್ನು ಅಮಾನತುಗೊಳಿಸಿದ ಪಶ್ಚಿಮ ಬಂಗಾಳ ಸರ್ಕಾರ**

**೩. ಭೋಜಶಾಲಾ ಸಂಕೀರ್ಣವನ್ನು ಹಿಂದೂ ದೇವಾಲಯ ಎಂದು ಘೋಷಿಸಿದ ಮಧ್ಯಪ್ರದೇಶ ಉಚ್ಚ ನ್ಯಾಯಾಲಯ**

**೪. ಐಪಿಎಲ್ ಟಿ-೨೦ ಕ್ರಿಕೆಟ್: ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಟಾಸ್ ಗೆದ್ದ ಲಕ್ನೋ ಸೂಪರ್ ಜೈಂಟ್ಸ್ ಫೀಲ್ಡಿಂಗ್ ಆಯ್ಕೆ**

**<>><><*><><<>**

ಪಂಚರಾಷ್ಟ್ರಗಳ ಪ್ರವಾಸದ ಮೊದಲ ಚರಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಯುಎಇ ಗೆ ಭೇಟಿ ನೀಡಿದ್ದಾರೆ. ಅಬುದಾಬಿ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಅವರನ್ನು ಯುಎಇ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಆತ್ಮೀಯವಾಗಿ ಬರಮಾಡಿಕೊಂಡರು. ಪ್ರಧಾನಿ ಅವರ ವಿಮಾನವು ಯುಎಇ ವಾಯು ಪ್ರದೇಶ ಪ್ರವೇಶಿಸುತ್ತಿದ್ದಂತಯೇ ಯುಎಇ ಎಫ್-೧೬ ವಿಮಾನಗಳು ಬೆಂಗಾವಲು ಪಡೆಯಾಗಿ ಕಾರ್ಯ ನಿರ್ವಹಿಸಿದವು. ನಂತರ ನಡೆದ ಸಭೆಯಲ್ಲಿ ಉಭಯ ದೇಶಗಳ ನಡುವಿನ ಭದ್ರತಾ ಸಹಕಾರವನ್ನು ಸಾಂಸ್ಥಿಕಗೊಳಿಸುವ ಮಹತ್ವದ ಹೆಜ್ಜೆಯಾದ ಕಾರ್ಯ ತಂತ್ರದ ರಕ್ಷಣಾ ಪಾಲುದಾರಿಕೆ ಒಪ್ಪಂದಕ್ಕೆ ಎರಡೂ ಕಡೆಯವರು ಸಹಿ ಹಾಕಿದರು. ಇದೇ ವೇಳೆ, ಕಚ್ಚಾ ತೈಲ ಪೂರೈಕೆ ಕುರಿತ ಪ್ರತ್ಯೇಕ ಒಪ್ಪಂದಕ್ಕೆ ಸಹಿ ಹಾಕಲಾಯಿತು. ಭಾರತದ ಪಶ್ಚಿಮ ಕರಾವಳಿಯ ವಡಿನಾರ್‌ನಲ್ಲಿ ಹಡಗು ದುರಸ್ತಿ ಘಟಕ ಸ್ಥಾಪಿಸುವ ಒಪ್ಪಂದಕ್ಕೆ ಉಭಯ ಕಡೆಯವರು ಸಹಿ ಹಾಕಿದರು. ಈ ಸಂದರ್ಭದಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ

ಮೋದಿ, ಭಾರತ ಮತ್ತು ಯುಎಇ ನಡುವಿನ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆ ವಿವಿಧ ವಲಯಗಳಲ್ಲಿ ಬಲವಾಗಿ ಬೆಳೆಯುತ್ತಲೇ ಇದೆ ಎಂದು ಹೇಳಿದರು.

**<>><><*><><<>**

ಆಂಧ್ರಪ್ರದೇಶದ ಶ್ರೀ ಸತ್ಯಸಾಯಿ ಜಿಲ್ಲೆಯ ಪುಟ್ಟಪರ್ತಿಯಲ್ಲಿ ಅಡ್ವಾನ್ಸ್ಡ್ ಮೀಡಿಯಂ ಕಾಂಬ್ಯಾಟ್ ಏರ್‌ಕ್ರಾಫ್ಟ್- ಎಎಮ್‌ಸಿಎ ಸೌಲಭ್ಯಕ್ಕೆ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು ಶಂಕುಸ್ಥಾಪನೆ ನೆರವೇರಿಸಿದರು. ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಸಚಿವ ರಾಜನಾಥ್ ಸಿಂಗ್, ಹೊಸದಾಗಿ ಪ್ರಾರಂಭಿಸಲಾದ ರಕ್ಷಣಾ ಯೋಜನೆಗಳು ರಾಷ್ಟ್ರೀಯ ಭದ್ರತೆಯನ್ನು ಬಲಪಡಿಸುತ್ತವೆ, ಕೈಗಾರಿಕಾ ಬೆಳವಣಿಗೆಯನ್ನು ವೇಗಗೊಳಿಸುತ್ತವೆ ಮತ್ತು ಯುವಕರಿಗೆ ದೊಡ್ಡ ಪ್ರಮಾಣದ ಉದ್ಯೋಗ ಅವಕಾಶಗಳನ್ನು ಸೃಷ್ಟಿಸುತ್ತವೆ ಎಂದು ಹೇಳಿದರು. ನಿರ್ಣಾಯಕ ಭದ್ರತಾ ಸಂದರ್ಭಗಳಲ್ಲಿ ಭಾರತ ಇನ್ನು ಮುಂದೆ ವಿದೇಶಗಳನ್ನು ಅವಲಂಬಿಸಲು ಸಾಧ್ಯವಿಲ್ಲ. ನಿಜವಾದ ರಾಷ್ಟ್ರೀಯ ಭದ್ರತೆಯು ಸ್ವಾವಲಂಬನೆಯ ಮೇಲೆ ಅವಲಂಬಿತವಾಗಿರಬೇಕು ಎಂದರು. ದೇಶೀಯ ರಕ್ಷಣಾ ಉತ್ಪಾದನೆಯು ೨೦೧೪ರಲ್ಲಿ ೪೬ ಸಾವಿರ ಕೋಟಿ ರೂಪಾಯಿಗಳಿಂದ 'ಮೇಕ್ ಇನ್ ಇಂಡಿಯಾ' ಕಾರ್ಯಕ್ರಮದಡಿಯಲ್ಲಿ ಪ್ರಸ್ತುತ ೧ ಲಕ್ಷದ ೫೪ ಸಾವಿರ ಕೋಟಿ ರೂಪಾಯಿಗೆ ಏರಿಕೆಯಾಗಿದೆ. ೨೦೧೪ರಲ್ಲಿ ೭೦೦ ಕೋಟಿ ರೂಪಾಯಿಗಳಿಷ್ಟಿದ್ದ ರಕ್ಷಣಾ ರಫ್ತು, ಪ್ರಸ್ತುತ ೪೦ ಸಾವಿರ ಕೋಟಿ ರೂಪಾಯಿಗಳಿಗೆ ಏರಿಕೆಯಾಗಿದೆ. ಇದು ಭಾರತದ ಬೆಳೆಯುತ್ತಿರುವ ಜಾಗತಿಕ ಉತ್ಪಾದನಾ ಸಾಮರ್ಥ್ಯವನ್ನು ಪ್ರತಿಬಿಂಬಿಸುತ್ತದೆ ಎಂದು ಸಚಿವ ರಾಜನಾಥ್ ಸಿಂಗ್ ತಿಳಿಸಿದ್ದಾರೆ.

**<>><><*><><<>**

ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಪ್ರಕರಣಕ್ಕೆ ಸಂಬಂಧಿಸಿದಂತೆ ಪಶ್ಚಿಮ ಬಂಗಾಳ ಸರ್ಕಾರ ಮೂವರು ಐಪಿಎಸ್ ಅಧಿಕಾರಿಗಳನ್ನು ಅಮಾನತುಗೊಳಿಸಿದೆ. ಕರ್ತವ್ಯ ಲೋಪ, ಸಂತ್ರಸ್ತೆಯ ಪೋಷಕರಿಗೆ ಹಣದ ಬೇಡಿಕೆ ಮತ್ತು ಸರ್ಕಾರದ ಅನುಮತಿಯಿಲ್ಲದೆ ಮಾಧ್ಯಮ ಸಂವಾದಗಳನ್ನು ನಡೆಸಿರುವುದು ಸೇರಿದಂತೆ ಹಲವು ಆರೋಪಗಳ ಮೇಲೆ ಕೋಲ್ಕತ್ತಾ ಪೊಲೀಸ್ ಆಯುಕ್ತ ವಿನೀತ್ ಗೋಯಲ್, ಮಾಜಿ ಉಪ ಆಯುಕ್ತರಾದ ಇಂದಿರಾ ಮುಖರ್ಜಿ ಮತ್ತು ಅಬಿಶೇಕ್ ಗುಪ್ತಾ ಅವರನ್ನು ಅಮಾನತುಗೊಳಿಸಲಾಗಿದೆ. ರಾಜ್ಯ ಸರ್ಕಾರ ಇವರ ವಿರುದ್ಧ ಇಲಾಖಾ ತನಿಖೆ ನಡೆಸಲಿದೆ ಎಂದು ಮುಖ್ಯಮಂತ್ರಿ ಸುವೇಂದು ಅಧಿಕಾರಿ ಮಾಹಿತಿ ನೀಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವೈದ್ಯೆಯಾಗಿದ್ದ ಸಂತ್ರಸ್ತೆಯನ್ನು ೨೦೨೪ ರ ಆಗಸ್ಟ್‌ನಲ್ಲಿ ಅತ್ಯಾಚಾರ ಮಾಡಿ ಕೊಲೆ ಮಾಡಲಾಯಿತು. ಆಕೆಯ ಪೋಷಕರು ನ್ಯಾಯಕ್ಕಾಗಿ ನಿರಂತರವಾಗಿ ಪ್ರತಿಪಾದಿಸಿದ್ದಾರೆ ಎಂದರು.

<>><><*><><<>

ವೈದ್ಯಕೀಯ ಪದವಿ ಕೋರ್ಸ್‌ಗಳಿಗೆ ಪ್ರವೇಶಕ್ಕಾಗಿ ನಡೆಸುವ ರಾಷ್ಟ್ರೀಯ ಅರ್ಹತಾ ಪ್ರವೇಶ ಪರೀಕ್ಷೆ ನೀಟ್ - ಯುಜಿ ೨೦೨೬ರ ಮರು ಪರೀಕ್ಷೆಯ ದಿನಾಂಕವನ್ನು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಪ್ರಕಟಿಸಿದ್ದು, ಜೂನ್ ೨೧ರಂದು ದೇಶಾದ್ಯಂತ ಮರು ಪರೀಕ್ಷೆ ನಡೆಸಲು ನಿರ್ಧರಿಸಲಾಗಿದೆ. ಈ ತಿಂಗಳ ೩ ರಂದು ನಡೆದಿದ್ದ ಪರೀಕ್ಷೆಯ ಪತ್ರಿಕೆ ಸೋರಿಕೆಯಾದ ಆರೋಪದ ಹಿನ್ನೆಲೆಯಲ್ಲಿ ಪರೀಕ್ಷೆಯನ್ನು ರದ್ದುಗೊಳಿಸಲಾಗಿದ್ದು, ಪ್ರಸ್ತುತ ಈ ಪ್ರಕರಣದ ತನಿಖೆಯನ್ನು ಸಿಬಿಐ ನಡೆಸುತ್ತಿದ್ದು, ಅಭ್ಯರ್ಥಿಗಳು ಮತ್ತು ಪೋಷಕರು ಅಧಿಕೃತ ಮಾಹಿತಿಗಾಗಿ ಎನ್‌ಟಿಎ ಯ ಅಧಿಕೃತ ಮಾಧ್ಯಮಗಳನ್ನು ಮಾತ್ರ ಅವಲಂಬಿಸುವಂತೆ ಮನವಿ ಮಾಡಲಾಗಿದೆ. ನವದೆಹಲಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್, ಪ್ರಸ್ತುತ ಚಾಲ್ತಿಯಲ್ಲಿರುವ ಓಎಂಆರ್ ಆಧಾರಿತ ಪರೀಕ್ಷಾ ಪದ್ಧತಿಯ ಬದಲಾಗಿ, ಮುಂದಿನ ವರ್ಷದಿಂದ ನೀಟ್ ಪರೀಕ್ಷೆಯನ್ನು 'ಕಂಪ್ಯೂಟರ್ ಆಧಾರಿತ ಪರೀಕ್ಷೆ' ಮಾದರಿಯಲ್ಲಿ ನಡೆಸಲಾಗುವುದು ಎಂದು ತಿಳಿಸಿದರು. ಭವಿಷ್ಯದಲ್ಲಿ ಅಕ್ರಮಗಳು ಮರುಕಳಿಸದಂತೆ ಪರೀಕ್ಷಾ ವ್ಯವಸ್ಥೆಯನ್ನು ಬಲಪಡಿಸಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ ಸಚಿವರು, ಪರೀಕ್ಷಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನಂಬಿಕೆಯನ್ನು ಮರುಸ್ಥಾಪಿಸಲು ಸರ್ಕಾರ ಬದ್ಧವಾಗಿದೆ ಎಂದು ಪುನರುಚ್ಚರಿಸಿದರು.

<>><><*><><<>

ಬದಲಾಗುತ್ತಿರುವ ಜಾಗತಿಕ ಪರಿಸ್ಥಿತಿಗೆ ಅನುಗುಣವಾಗಿ ಸುಧಾರಿತ ಮತ್ತು ಪರಿಣಾಮಕಾರಿ ಬಹು ಪಕ್ಷೀಯ ವ್ಯವಸ್ಥೆಯನ್ನು ಮುನ್ನಡೆಸಲು ಭಾರತ ತನ್ನ ಎಲ್ಲಾ ಪಾಲುದಾರ ರಾಷ್ಟ್ರಗಳೊಂದಿಗೆ ಒಟ್ಟಾಗಿ ಕೆಲಸ ಮಾಡಲು ಬದ್ಧವಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ನಡೆಯುತ್ತಿರುವ ಬ್ರಿಕ್ಸ್ ವಿದೇಶಾಂಗ ಸಚಿವರ ಸಭೆ-೨೦೨೬ರ ಎರಡನೇ ದಿನದ ಮುಕ್ತ ಅಧಿವೇಶನವನ್ನುದ್ದೇಶಿಸಿ ಮಾತನಾಡಿದ ಅವರು, ಪ್ರಸ್ತುತ ಅಂತಾರಾಷ್ಟ್ರೀಯ ಹಣಕಾಸು ವ್ಯವಸ್ಥೆಯಲ್ಲಿ ತುರ್ತು ಸುಧಾರಣೆಗಳ ಅಗತ್ಯವಿದೆ. ಇಂದಿನ ನೈಜಸ್ಥಿತಿಯನ್ನು ಬಿಂಬಿಸುವ ಹಾಗೂ ಉದಯೋನ್ಮುಖ ಮಾರುಕಟ್ಟೆಗಳು ಮತ್ತು ಅಭಿವೃದ್ಧಿಶೀಲ ರಾಷ್ಟ್ರಗಳ ಆಕಾಂಕ್ಷೆಗಳಿಗೆ ಸ್ಪಂದಿಸುವ ಜಾಗತಿಕ ವ್ಯವಸ್ಥೆಯ ಪರವಾಗಿ ಭಾರತ ನಿರಂತರವಾಗಿ ಧ್ವನಿ ಎತ್ತುತ್ತಾ ಬಂದಿದೆ ಎಂದು ಹೇಳಿದರು.

<>><><*><><<>

ನವದೆಹಲಿಯಲ್ಲಿ ನಡೆದ ಬ್ರಿಕ್ಸ್ ಇಂಡಿಯಾ ೨೦೨೬ರ ವಿದೇಶಾಂಗ ಸಚಿವ ಸಭೆಯ ನೇಪಥ್ಯದಲ್ಲಿ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಇಂದು ಮಲೇಷಿಯಾದ ವಿದೇಶಾಂಗ ಸಚಿವ ಮೊಹಮ್ಮದ್ ಹಸನ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಈ ವೇಳೆ, ಭಾರತ-ಮಲೇಷಿಯಾ ನಡುವಿನ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯ ಪ್ರಗತಿಯನ್ನು ಉಭಯ ನಾಯಕರು ಪರಿಶೀಲಿಸಿದರು.

<>><><*><><<>

ಮಧ್ಯಪ್ರದೇಶ ಉಚ್ಚ ನ್ಯಾಯಾಲಯ ಇಂದು ಧಾರ್ ಜಿಲ್ಲೆಯಲ್ಲಿರುವ ಭೋಜಶಾಲಾ ಸಂಕೀರ್ಣವನ್ನು ಹಿಂದೂ ದೇವಾಲಯ ಎಂದು ಘೋಷಿಸಿತು. ಇಲ್ಲಿ ಸರಸ್ವತಿ ದೇವಾಲಯವಿತ್ತು ಮತ್ತು ಆ ಸ್ಥಳವು ಸಂಸ್ಕೃತ ಕಲಿಕೆಯ ಕೇಂದ್ರವಾಗಿತ್ತು ಎಂದು ನ್ಯಾಯಾಲಯ ಹೇಳಿದೆ. ಮುಸ್ಲಿಂ ಸಮುದಾಯ ಇದನ್ನು ಕಮಲ್ ಮೌಲಾ ಮಸೀದಿ ಎಂದು ಕರೆಯುತ್ತಾರೆ. ಮುಸ್ಲಿಮರು ಆ ಸ್ಥಳದಲ್ಲಿ ನಮಾಜ್ ಮಾಡಲು ಅವಕಾಶ ನೀಡಿದ್ದ ಹಿಂದಿನ ಆದೇಶವನ್ನು ನ್ಯಾಯಾಲಯ ರದ್ದುಗೊಳಿಸಿದೆ. ಮಸೀದಿ ನಿರ್ಮಿಸಲು ಪರ್ಯಾಯ ಭೂಮಿಗಾಗಿ ಮುಸ್ಲಿಂ ಕಡೆಯವರು ಸರ್ಕಾರವನ್ನು ಸಂಪರ್ಕಿಸಬಹುದು ಎಂದು ನ್ಯಾಯಾಲಯ ಹೇಳಿದೆ. ನ್ಯಾಯಮೂರ್ತಿಗಳಾದ ವಿಜಯ್ ಕುಮಾರ್ ಶುಕ್ಲಾ ಮತ್ತು ಅಲೋಕ್ ಅವಸ್ಥಿ ಅವರಿದ್ದ ನ್ಯಾಯಪೀಠ ಈ ತೀರ್ಪು ನೀಡಿದೆ. ಭಾರತೀಯ ಪುರಾತತ್ವ ಸರ್ವೇಕ್ಷಣ ಇಲಾಖೆಯ ವರದಿ ಮತ್ತು ಪುರಾತತ್ವ ಶಾಸ್ತ್ರದ ಪುರಾವೆಗಳ ಆಧಾರ ಮೇಲೆ ನ್ಯಾಯಾಲಯ ಈ ತೀರ್ಮಾನಕ್ಕೆ ಬಂದಿದೆ. ನ್ಯಾಯಾಲಯವು ಭೋಜಶಾಲಾ ಸಂಕೀರ್ಣದ ಆಡಳಿತ ಮತ್ತು ನಿರ್ವಹಣೆಯನ್ನು ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ ಮತ್ತು ಕೇಂದ್ರ ಸರ್ಕಾರಕ್ಕೆ ಹಸ್ತಾಂತರಿಸಿದೆ.

<>><><*><><<>

ಪಶ್ಚಿಮ ಏಷ್ಯಾದಲ್ಲಿ ಶಾಂತಿಗಾಗಿ ಭಾರತ ಹೆಚ್ಚಿನ ಪಾತ್ರ ವಹಿಸಬಹುದು ಎಂದು ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಇರಾನ್‌ಗೆ ಸಂಬಂಧಿಸಿದ ಯಾವುದಕ್ಕೂ ಮಿಲಿಟರಿ ಪರಿಹಾರವಿಲ್ಲ. ಹಾರ್ಮುಜ್ ಜಲಸಂಧಿಯ ಮೂಲಕ ಎಲ್ಲಾ ಹಡಗುಗಳನ್ನು ಸಾಗಿಸಲು ಇರಾನ್ ಸಹಾಯ ಮಾಡಲು ಸಿದ್ಧವಾಗಿದೆ ಎಂದು ತಿಳಿಸಿದರು. ಹಾರ್ಮುಜ್ ಜಲಸಂಧಿಯಲ್ಲಿನ ಪರಿಸ್ಥಿತಿ ಈಗ ತುಂಬಾ ಜಟಿಲವಾಗಿದೆ. ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ಬಗ್ಗೆ ಮಾತುಕತೆಯ ಮೂಲಕ ಇತ್ಯರ್ಥಪಡಿಸುವುದನ್ನು ಹೊರತುಪಡಿಸಿ, ಯಾವುದೇ ಪರಿಹಾರವಿಲ್ಲ. ಭಾರತದ ಯಾವುದೇ

ರಚನಾತ್ಮಕ ಪಾತ್ರವನ್ನು ಇರಾನ್ ಸ್ವಾಗತಿಸುತ್ತದೆ ಎಂದು ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಹೇಳಿದರು.

**<>><><*><><<>**

ಲಕ್ನೋದ ಭಾರತ ರತ್ನ ಶ್ರೀ ಅಟಲ್ ಬಿಹಾರಿ ವಾಜಪೇಯಿ ಏಕನಾ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ಹಾಗೂ ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಲಕ್ನೋ ಸೂಪರ್ ಜೈಂಟ್ಸ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

**<>><><*><><<>**

ಬ್ಯಾಂಕಾಕ್‌ನಲ್ಲಿ ನಡೆಯುತ್ತಿರುವ ಥೈಲ್ಯಾಂಡ್ ಓಪನ್ ಬ್ಯಾಡ್ಮಿಂಟನ್‌ನಲ್ಲಿಂದು ಪುರುಷರ ಡಬಲ್ಸ್ ವಿಭಾಗದಲ್ಲಿ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ, ಸೆಮಿಫೈನಲ್ ಪ್ರವೇಶಿಸಿದೆ. ಈ ಜೋಡಿ, ಜಪಾನಿನ ಟಕುಮಿ ನೊಮುರಾ ಮತ್ತು ಯುಯಿಚಿ ಶಿಮೊಗ್ಗಾಮಿ ಜೋಡಿಯನ್ನು ೨೧-೧೨, ೨೧-೧೩ ಸೆಟ್‌ಗಳಿಂದ ಸೋಲಿಸಿತು. ಮಹಿಳಾ ಸಿಂಗಲ್ಸ್‌ನಲ್ಲಿ, ವಿಶ್ವದ ೧೨ನೇ ಶ್ರೇಯಾಂಕದ ಮತ್ತು ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತೆ ಪಿ.ವಿ.ಸಿಂಧು ಕ್ವಾರ್ಟರ್ ಫೈನಲ್‌ನಲ್ಲಿ ಜಪಾನ್‌ನ ಅಕಾನೆ ಯಮಗುಚಿ ವಿರುದ್ಧ ೨೧-೧೯, ೧೮-೨೧, ೧೫-೨೧ ಸೆಟ್‌ಗಳಿಂದ ಸೋಲಿಸಿದರು. ಇದಕ್ಕೂ ಮೊದಲು ಅವರು ಡೆನ್ಮಾರ್ಕ್‌ನ ಅಮಾಲಿ ಶುಲ್ಜ್ ಅವರನ್ನು ೨೧-೧೩, ೨೧-೧೫ ನೇರ ಸೆಟ್‌ಗಳಿಂದ ಸೋಲಿಸಿ, ಕ್ವಾರ್ಟರ್ ಫೈನಲ್ ಪ್ರವೇಶಿಸಿದರು.

**<>><><*><><<>**

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ವಿದೇಶ ಭೇಟಿಗಳ ಬಗ್ಗೆ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಪ್ರಶ್ನಿಸಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿಯೊಬ್ಬ ಸಂಸದರು ವಿದೇಶಿ ಭೇಟಿಗಳ ಕುರಿತು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಬಹಿರಂಗಪಡಿಸುವುದು ಕಡ್ಡಾಯವಾಗಿದೆ. ಎಫ್‌ಸಿಆರ್‌ಎ ಕಾಯ್ದೆ-೨೦೧೦ರ ನಿಂಬಂಧನೆಗಳನ್ನು ಅನುಸರಿಸಬೇಕು. ಕಾನೂನಿನ ಮುಂದೆ ಎಲ್ಲಾ ಭಾರತೀಯರು ಸಮಾನರು. ರಾಹುಲ್ ಗಾಂಧಿಯವರಿಗೂ ಇದೇ ಮಾನದಂಡಗಳು ಅನ್ವಯವಾಗಬೇಕು ಎಂದು ಹೇಳಿದರು.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><><ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಿಗ್ಗೆ ೬.೦೫ ಕ್ಕೆ ><><<>